## ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ 6ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು-3.

ಸಂಖ್ಯೆ:ಎ8/ಎಸ್.ಎಸ್.ಎಲ್.ಸಿ.ಅಧಿಸೂಚನೆ/ಏಪ್ರಿಲ್-2020/24/2019-20 ದಿನಾಂಕ: 14.10.2019

:: ಸುತ್ತೋಲೆ ::

ವಿಷಯ:- 2020ರ ಮಾರ್ಚ್/ಏಪ್ರಿಲ್ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಸಂಬಂಧಿಸಿದಂತೆ ಮಾನ್ಯತೆ ಪಡೆದ ಶಾಲೆಗಳ ಬಗ್ಗೆ ಮಾಹಿತಿ ಸಲ್ಲಿಸುವ ಕುರಿತು.

ಉಲ್ಲೇಖ:- ಮಂಡಳಿ ಅಧಿಸೂಚನೆ ಸಂಖ್ಯೆ ಎ8/ಎಸ್.ಎಸ್.ಎಲ್.ಸಿ.ಅಧಿಸೂಚನೆ/ಏಪ್ರಿಲ್-2020/24/2019-20 ದಿನಾಂಕ:30.08.2019.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಉಪನಿರ್ದೇಶಕರು (ಆಡಳಿತ)ರವರ ಗಮನಕ್ಕೆ ತರಬಯಸುವುದೇನೆಂದರೆ, 2020ರ ಮಾರ್ಚ್/ಏಪ್ರಿಲ್ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಹಾಜರಾಗುವ ಅರ್ಹ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಅಹ್ವಾನಿಸಿರುವ ಕುರಿತು ಉಲ್ಲೇಖದ ಪ್ರಕಾರ ಅಧಿಸೂಚನೆ ಹೊರಡಿಸಲಾಗಿರುವುದನ್ನು ಜ್ಞಾಪಿಸಲಾಗಿದೆ. ಮೇಲಿನ ಅಧಿಸೂಚನೆ ಭಾಗ ಸಂಖ್ಯೆ XVI ರಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳು ತೆಗೆದುಕೊಳ್ಳಬೇಕಾದ ಕ್ರಮದ ಬಗ್ಗೆ ವಿವರಿಸಲಾಗಿದೆ. ಅದರಂತೆ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ತಮ್ಮ ತಾಲ್ಲೂಕು ಹಂತದಲ್ಲಿ ಬರುವ ಪ್ರತಿಯೊಂದು ಖಾಸಗಿ ಶಾಲೆಗಳ ಅಧಿಕೃತತೆಯ ಬಗ್ಗೆ ದಿನಾಂಕ:21.10.2019ರೊಳಗೆ ನಿಗಧಿಪಡಿಸಿದ ನಮೂನೆಯಲ್ಲಿ ಮಾಹಿತಿ ಸಲ್ಲಿಸುವಂತೆ ಸೂಚಿಸಲಾಗಿದೆ. ಸದರಿ ವಿಷಯದ ಬಗ್ಗೆ ಅತ್ಯಂತ ನಿಗಾವಹಿಸಿ ಈ ಕೆಳಗಿನಂತೆ ಕ್ರಮಕೈಗೊಳ್ಳಲು ತಿಳಿಸಲಾಗಿದೆ.

1. 2019-20 ನೇ ಸಾಲಿನಲ್ಲಿ ಹೊಸದಾಗಿ 10ನೇ ತರಗತಿ ಹೊಂದಿರುವ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಸರ್ಕಾರದಿಂದ ಮಾನ್ಯತೆ ಪಡೆದ ಅನುದಾನ ರಹಿತ ಶಾಲೆಗಳು ಶಾಲಾ ಸಂಕೇತ ಪಡೆದ ಬಗ್ಗೆ ಪರಿಶೀಲಿಸಿಕೊಂಡು, ಶಾಲಾ ಸಂಕೇತ ಪಡೆಯದ ಶಾಲೆಗಳ ಬಗ್ಗೆ ವೈಯುಕ್ತಿಕ ಗಮನಹರಿಸಿ ನಿಯಮಾನುಸಾರ ಮಂಡಳಿಯಿಂದ ಶಾಲಾ ಸಂಕೇತ ಪಡೆದು ಮಂಡಳಿಯ ಜಾಲತಾಣದಲ್ಲಿ ಲಾಗಿನ್ ಆಗಿ ನಿಗಧಿತ ದಿನಾಂಕದೊಳಗೆ ಅಭ್ಯರ್ಥಿಗಳ ವಿವರಗಳನ್ನು ಅಪ್‌ಲೋಡ್ ಮಾಡಲು ಸೂಕ್ತ ಕ್ರಮವಹಿಸಲು ತಿಳಿಸಿದೆ. ಶಾಲಾ ಸಂಕೇತ ಪಡೆಯಲು ಅಂತಿಮ ದಿನಾಂಕ:21.10.2019 ಆಗಿರುತ್ತದೆ. ಅಂತಿಮ ದಿನಾಂಕದ ನಂತರ ಬರುವ ಪ್ರಸ್ತಾವನೆಯನ್ನು ತಿರಸ್ಕರಿಸಲಾಗುವುದು.
2. ಶಾಲೆಯ ಮಾನ್ಯತೆ ನವೀಕರಣದ ವಿಷಯವು ಶಾಲೆಯ/ಕ್ಷೇತ್ರ ಶಿಕ್ಷಣಾಧಿಕಾರಿಗಳ/ಉಪನಿರ್ದೇಶಕರ ಪೂರ್ಣ ಜವಾಬ್ದಾರಿಯಾಗಿರುತ್ತದೆ.
3. ಒಂದು ವೇಳೆ 2019-20 ನೇ ಸಾಲಿಗೆ ಶಾಲಾ ಮಾನ್ಯತೆ ನವೀಕರಣ ಆಗದಿರುವ ಪ್ರಕರಣದಿಂದಾಗಿ ವಿದ್ಯಾರ್ಥಿಗಳ ವಿವರಗಳನ್ನು ಮಂಡಳಿ ಜಾಲತಾಣದಲ್ಲಿ ಅಪ್‌ಲೋಡ್ ಮಾಡದಿದ್ದಲ್ಲಿ ಹಾಗೂ ಪರೀಕ್ಷಾ ಶುಲ್ಕ ಪಾವತಿಸದಿದ್ದಲ್ಲಿ, ಇದರಿಂದ ಮುಂದೆ ವಿದ್ಯಾರ್ಥಿಗಳಿಗೆ ತೊಂದರೆಯುಂಟಾದಲ್ಲಿ ಇದಕ್ಕೆ ಮಂಡಳಿಯು ಜವಾಬ್ದಾರರಾಗುವುದಿಲ್ಲ. ಆದ್ದರಿಂದ ಮಾನ್ಯತೆ ನವೀಕರಣದ ಬಗ್ಗೆ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು ಹಾಗೂ ಉಪನಿರ್ದೇಶಕರು (ಆಡಳಿತ) ತಮ್ಮ ವ್ಯಾಪ್ತಿಯಲ್ಲಿ ಬರುವ ಶಾಲೆಗಳಿಗೆ ಮಾನ್ಯತೆ ನವೀಕರಣದ ಬಗ್ಗೆ ನಿಯಮಾನುಸಾರ ಅಗತ್ಯ ಕ್ರಮಕೈಗೊಳ್ಳುವುದು.

(ವಿ.ಸುಮಂಗಲ) 15/10/19
ನಿರ್ದೇಶಕರು, ಪರೀಕ್ಷೆಗಳು

ಗೆ,

1. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ), ಸಾರ್ವಜನಿಕ ಶಿಕ್ಷಣ ಇಲಾಖೆರವರಿಗೆ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆರವರಿಗೆ ಸೂಕ್ತ ಕ್ರಮಕ್ಕಾಗಿ.
3. ರಾಜ್ಯದ ಎಲ್ಲಾ ಸರ್ಕಾರಿ/ಮಾನ್ಯತೆ ಪಡೆದ ಅನುದಾನಿತ ಮತ್ತು ಅನುದಾನರಹಿತ ಪ್ರೌಢ ಶಾಲಾ ಮುಖ್ಯೋಪಾಧ್ಯಾಯರಿಗೆ (ಸಂಬಂಧಿಸಿದ ಉಪನಿರ್ದೇಶಕರ ಮುಖಾಂತರ) ಸೂಕ್ತ ಕ್ರಮಕ್ಕಾಗಿ.
4. ಕಛೇರಿ ಪ್ರತಿ.

A8_letter1